ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಶಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE : 6/3/2021

# ಕಾಂಗ್ರೆಸ್ ಪ್ರತಾಪ ನಡೆಯದ ಕಲಾಪ

## ಧರಣಿಯಿಂದಾಗಿ ಸಭೆ ಸೋಮವಾರಕ್ಕೆ ಮುಂದೂಡಿಕೆ



ವಿಧಾನಸಭೆಯಲ್ಲಿ ಕಾಂಗ್ರೆಸ್ ಸದಸ್ಯರು ಬಾವಿಗಿಳಿದು ಧರಣಿ ನಡೆಸಿದರು.

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

'ಒಂದು ದೇಶ, ಒಂದು ಚುನಾವಣೆ' ಚರ್ಚೆ ವಿರೋಧಿಸಿ ಕಾಂಗ್ರೆಸ್ ಸದಸ್ಯರು ವಿಧಾನ ಸಭೆಯಲ್ಲಿ ನಡೆಸಿದ ಧರಣಿಯಿಂದಾಗಿ ಯಾವುದೇ ಚರ್ಚೆಗಳಿಲ್ಲದೆ ಕಲಾಪ ಸೋಮವಾರಕ್ಕೆ ಮುಂದೂಡಿಕೆಯಾಗಿದೆ.

ಆಡಳಿತ ಪಕ್ಷ ಮತ್ತು ಪ್ರತಿಪಕ್ಷದ ಸದಸ್ಯರ ಗದ್ದಲ, ಆರೋಪ- ಪ್ರತ್ಯಾರೋಪ ಮತ್ತು ಮುಂದುವರಿದ ಕಾಂಗ್ರೆಸ್ ಸದಸ್ಯರ ಧರಣಿ, ಧಿಕ್ಕಾರದ ಘೋಷಣೆ ಕಾರಣ ಕಲಾಪವನ್ನು ಮೂರ್ನಾಲ್ಕು ಬಾರಿ ಮುಂದೂಡಲಾಯಿತು. ಗುರುವಾರವೂ ಇದೇ ವಿಚಾರಕ್ಕೆ ಕಲಾಪ ಬಲಿಯಾಗಿತ್ತು. ಭದ್ರಾವತಿ ಶಾಸಕ ಬಿ.ಕೆ. ಸಂಗಮೇಶ್ ತಮ್ಮ ಅಂಗಿ ಬಿಚ್ಚಿ ಪ್ರತಿಭಟಿಸಿದ್ದು ಟೀಕೆಗೆ ಗುರಿಯಾಗಿತ್ತು. ಶುಕ್ರವಾರ ಸಂಗಮೇಶ್ ಸದನ ಪ್ರವೇಶಕ್ಕೆ ಯತ್ನ ಮಾಡಿದರಾದರೂ ಮಾರ್ಷಲ್‌ಗಳು ಅವರನ್ನು ತಡೆದರು. ಇದು ಕಾಂಗ್ರೆಸ್ ಕೋಪ ಹೆಚ್ಚಿಸಿತು.

➤ 11

### ವಿಧಾನಪರಿಷತ್ ಹೈಲೈಟ್ಸ್

- ಡಿಪಿಆರ್ ಸಿದ್ಧಗೊಂಡ ನಂತರ ಧಾರವಾಡ-ಬೆಳಗಾವಿ ನಡುವೆ ನೂತನ ರೈಲು ಮಾರ್ಗ ನಿರ್ಮಾಣ: ಕೋಟ
- ರಾಜ್ಯದಲ್ಲಿ ಕೋವಿಡ್ ಸೋಂಕಿನಿಂದಾಗಿ ಸಾರಿಗೆ ಸಂಸ್ಥೆಗೆ 4 ಸಾವಿರ ಕೋಟಿಗೂ ಹೆಚ್ಚು ನಷ್ಟ: ಸವದಿ
- ಬಸ್ ನಿಲ್ದಾಣಗಳಲ್ಲಿ ಮಹಿಳಾ ವಿಶ್ರಾಂತಿ ಗೃಹ ನಿರ್ಮಾಣ, ಸ್ಯಾಟಲೈಟ್ ಬಸ್ ನಿಲ್ದಾಣ ಸ್ಥಾಪನೆಗೆ ಆದ್ಯತೆ
- ಕೇಂದ್ರಕ್ಕೆ ಯಾವುದೇ ತಪ್ಪು ಮಾಹಿತಿಯನ್ನು ರಾಜ್ಯ ಸರಕಾರ ನೀಡಿಲ್ಲ: ಡಿಸಿಎಂ ಗೋವಿಂದ ಕಾರಜೋಳ
- ರಾಜ್ಯದಲ್ಲಿರುವ ಸ್ತ್ರೀ ಶಕ್ತಿ ಸಹಾಯ ಸಂಘ ಬಲವರ್ಧನೆಗೆ ಬ್ಯಾಂಕ್‌ಗಳ ಮೂಲಕ 10,100 ಕೋಟಿ ರು.ಗಳ ಸಾಲ ಕೊಡಿಸಲಾಗಿದೆ: ಸಚಿವೆ ಶಶಿಕಲಾ ಜೊಲ್ಲೆ

# ಕಾಂಗ್ರೆಸ್ ಪ್ರಲಾಪ, ನಡೆಯದ ಕಲಾಪ

6/3/21

ಈ ಎರಡು ಕಾರಣಗಳನ್ನಿಟ್ಟುಕೊಂಡು ಚರ್ಚೆಗೆ ಬಾರದ ಕಾಂಗ್ರೆಸ್ ಸದಸ್ಯರು, ಸರಕಾರ ನೀತಿಯ ವಿರುದ್ಧ ಕಿಡಿಕಾರಿದರು. ವಿಧಾನಸಭೆ ಕಲಾಪ ಆರಂಭವಾಗುತ್ತಿದ್ದಂತೆ ಬಾವಿಗಿಳಿದು ಪ್ರತಿಭಟನೆ ಮುಂದುವರಿಸಿದರು. ಆಗ ಆಡಳಿತ ಮತ್ತು ವಿರೋಧಿ ಸದಸ್ಯರ ನಡುವೆ ಮಾತಿನ ಚಕಮಕಿ ನಡೆದು ಕೋಲಾಹಲ ಸೃಷ್ಟಿಯಾಯಿತು. ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಕಲಾಪವನ್ನು ಕೆಲ ಕಾಲ ಮುಂದೂಡಿದರು. ವಿಧಾನಸಭೆ ಇಂದಿನ ಕಾರ್ಯಕಲಾಪಗಳ ಪಟ್ಟಿಯಲ್ಲಿ 'ಒಂದು ದೇಶ, ಒಂದು ಚುನಾವಣೆ' ಬಿಟ್ಟು ಬೇರಾವುದೇ ವಿಷಯದ ಉಲ್ಲೇಖವಿರಲಿಲ್ಲ.

**ಸ್ಪೀಕರ್ ನಡೆ ವಿರುದ್ಧ ಸಿದ್ದು ಆಕ್ರೋಶ:** ಸ್ಪೀಕರ್ ಆರ್‌ಎಸ್‌ಎಸ್ ಸಿದ್ಧಾಂತದಂತೆ ನಡೆದುಕೊಳ್ಳುತ್ತಿದ್ದಾರೆ. ಸರಕಾರ ಕೂಡ ಅವರ ತಾಳಕ್ಕೆ ತಕ್ಕಂತೆ ನಡೆಯುತ್ತಿದೆ. ಹೀಗಾಗಿ, ನಾವು 'ಒಂದು ದೇಶ, ಒಂದು ಚುನಾವಣೆ' ಚರ್ಚೆಯಲ್ಲಿ ಭಾಗವಹಿಸದಿರಲು ತೀರ್ಮಾನಿಸಿದ್ದೇವೆ ಎಂದು ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ತಿಳಿಸಿದ್ದಾರೆ.

- ಸಂಗಮೇಶ್ ಸದನ ಪ್ರವೇಶಕ್ಕೆ ಯತ್ನಿಸಿದರಾದರೂ ಮಾರ್ಷಲ್‌ಗಳಿಂದ ಅಡ್ಡಿ
- ಈ ಎರಡು ಕಾರಣಗಳನ್ನಿಟ್ಟುಕೊಂಡು ಚರ್ಚೆಗೆ ಬಾರದ ಕಾಂಗ್ರೆಸ್ ಸದಸ್ಯರು
- ಸ್ಪೀಕರ್ ಆರ್‌ಎಸ್‌ಎಸ್ ಸಿದ್ಧಾಂತದಂತೆ ನಡೆದುಕೊಳ್ಳುತ್ತಿದ್ದಾರೆ: ಸಿದ್ದು



ನಾವು ಆರ್‌ಎಸ್‌ಎಸ್ ಕಾರ್ಯಕರ್ತರು ಎಂಬ ಬಗ್ಗೆ ಹೆಮ್ಮೆಯಿದೆ. ಆರ್‌ಎಸ್‌ಎಸ್ ಅನ್ನು ದೂಷಿಸುತ್ತಲೇ ಸಿದ್ದರಾಮಯ್ಯ ತಮ್ಮ ಪಕ್ಷವನ್ನು ಹಾಳು ಮಾಡುತ್ತಿದ್ದಾರೆ. ಪ್ರಧಾನಿ ಮೋದಿ ಮತ್ತು ಆರ್‌ಎಸ್‌ಎಸ್ ಬಿಟ್ಟು ಅವರಿಗೆ ಟೀಕೆ ಮಾಡಲು ಮತ್ತೆ ಯಾವ ವಿಷಯವೂ ಇಲ್ಲ. ಈ ಕಾರಣಕ್ಕೆ ಸದನದಿಂದ ಹೊರನಡೆದು ಪಲಾಯನ ಮಾಡುತ್ತಿದ್ದಾರೆ.

– ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿ



ನನ್ನನ್ನು ಮೊಗಸಾಲೆಗೂ ಬಿಡುತ್ತಿಲ್ಲ, ಸದನಕ್ಕೂ ಬಿಡುತ್ತಿಲ್ಲ. ನನ್ನನ್ನು ಸದನದೊಳಗೆ ಬೇಡ, ಮೊಗಸಾಲೆಗೂ ಬಿಡುತ್ತಿಲ್ಲ ಎಂದರೆ ಹೇಗೆ? ವಿಧಾನಸೌಧವೇನು ಸ್ಪೀಕರ್ ಕಾಗೇರಿ ಅವರದ್ದಾ? ವಿಧಾನಸೌಧ ಜನರಿಗೆ ಸೇರಿದ್ದು. ಅವರು ಪಕ್ಷಪಾತ ಮಾಡುತ್ತಿದ್ದಾರೆ. ಸ್ಪೀಕರ್ ಸರ್ವಾಧಿಕಾರಿ ಧೋರಣೆ ತೋರುತ್ತಿದ್ದಾರೆ. ನನಗೆ ಅನ್ಯಾಯವಾಗಿದೆ. ನ್ಯಾಯ ಕೇಳುತ್ತೇನೆ. ನನ್ನ ಕುಟುಂಬದ ಮೇಲೆ ಕೇಸ್ ದಾಖಲಾಗಿದೆ. ಅದಕ್ಕೆ ನಾನು ಶರ್ಟ್ ಬಿಚ್ಚಿ ಸದನದ ಗಮನ ಸೆಳೆದಿದ್ದು, ತಾಕತ್ತಿದ್ದರೆ ನನ್ನನ್ನು ಬಂಧಿಸಲಿ.

– ಸಂಗಮೇಶ್ ಶಾಸಕ